KAUSHIK MUKHERJEE
CHIEF SECRETARY
ಮುಖ್ಯ ಕಾರ್ಯದರ್ಶಿ

ಕರ್ನಾಟಕ ಸರ್ಕಾರ
GOVERNMENT OF KARNATAKA

ವಿಧಾನ ಸೌಧ ಬೆಂಗಳೂರು – 560 001
# 320, 3rd Floor, Vidhana Soudha
Bangalore - 560 001
e-mail : cs@karnataka.gov.in
Phone . Off +91-80-22252442 / 22253716
Fax : +91-80-22258913

ದಿನಾಂಕ: 02.09.2015

ಸಂಖ್ಯೆ : ಸಿಆಸುಇ 05 ಗಕಾಸ 2015

## ಸುತ್ತೋಲೆ

ವಿಷಯ: ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ದಿನಾಂಕ:01/09/2015 ರಂದು ನಡೆದ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಮ್ಮೇಳನದ ನಿರ್ಣಯ.

*******

ಸರ್ಕಾರವು ರೂಪಿಸಿರುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮತ್ತು ಯೋಜನೆಗಳನ್ನು ಜಿಲ್ಲಾಡಳಿತವು ಅತ್ಯಂತ ದಕ್ಷತೆ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ನಿರ್ವಹಿಸಬೇಕಾಗಿದ್ದು, ಇದರಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಪಾತ್ರ ಅತ್ಯಂತ ಪ್ರಮುಖವಾಗಿರುತ್ತದೆ. ಸರ್ಕಾರವು ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿರುವ ಸೌಲಭ್ಯಗಳು ಜನಸಾಮಾನ್ಯರಿಗೆ ತಲುಪಿಸುವ ಕುರಿತು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ನಿವಾರಿಸಲು ಆಗಿಂದಾಗ್ಗೆ ಜನಸಂಪರ್ಕ ಸಭೆಗಳನ್ನು ನಡೆಸುವ ಅವಶ್ಯಕತೆ ಇರುತ್ತದೆ.

ಈ ನಿಟ್ಟಿನಲ್ಲಿ, ರಾಜ್ಯದಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರತಿ ತಿಂಗಳು ಆಯಾ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸಿ ಜನಸಾಮಾನ್ಯರ ಕುಂದುಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವ ಅಗತ್ಯವಿದೆಯೆಂದು ನಿರ್ಣಯಿಸಲಾಗಿದೆ. ಸದರಿ ಜನಸಂಪರ್ಕ ಸಭೆಗಳಲ್ಲಿ ಆಯಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಗೂ ಸಕ್ರಿಯವಾಗಿ ಭಾಗವಹಿಸಿ ಜನಸಾಮಾನ್ಯರ ಕುಂದುಕೊರತೆಗಳನ್ನು ಮತ್ತು ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

ಇದೇ ರೀತಿಯಾಗಿ, ಪ್ರತಿ ತಿಂಗಳು ಎಲ್ಲಾ ತಾಲ್ಲೂಕುಗಳಲ್ಲಿ ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸಿ ಜನಸಾಮಾನ್ಯರ ಕುಂದುಕೊರತೆಗಳನ್ನು ಪರಿಹರಿಸುವ ಅಗತ್ಯವಿದೆಯೆಂದು ನಿರ್ಣಯಿಸಲಾಗಿದೆ. ಸದರಿ ಜನಸಂಪರ್ಕ ಸಭೆಗಳಲ್ಲಿ ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು, ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಗೂ ಸಕ್ರಿಯವಾಗಿ ಭಾಗವಹಿಸಿ ಕುಂದುಕೊರತೆಗಳನ್ನು ಮತ್ತು ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರು ಅನುಕ್ರಮವಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಭೆಗಳನ್ನು ಆಯಾ ಜಿಲ್ಲಾ ಉಸ್ತುವಾರಿ ಸಚಿವರ ಮತ್ತು ಶಾಸಕರೊಂದಿಗೆ ಸಮಾಲೋಚಿಸಿ, ಸದರಿ ಜನಸಂಪರ್ಕ ಸಭೆಗಳನ್ನು ಏರ್ಪಡಿಸಲು ಕ್ರಮ ಕೈಗೊಳ್ಳತಕ್ಕದ್ದು.

ಪ್ರತಿ ತಿಂಗಳು ಜನಸಂಪರ್ಕ ಸಭೆಗಳನ್ನು ನಡೆಸಿ ಯೋಜನೆಗಳ ಸಮಗ್ರ ಅನುಷ್ಠಾನ ಮತ್ತು ಜನಸಾಮಾನ್ಯರ ಕುಂದುಕೊರತೆಗಳನ್ನು ಪರಿಹರಿಸಲು ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಆಯಾ ತಿಂಗಳ 10ನೇ ತಾರೀಖಿನೊಳಗೆ ತಪ್ಪದೇ ಸಲ್ಲಿಸತಕ್ಕದ್ದು.

(ಕೌಶಿಕ್ ಮುಖರ್ಜಿ)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಮು ತಿ ನೋ

**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 3 ಇಕಾಅ 2010

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 5ನೇ ಹಂತ, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 14/9/2010.

# ಸುತ್ತೋಲೆ

**ವಿಷಯ: ಇಲಾಖಾ ಮುಖ್ಯಸ್ಥರ ಪ್ರವಾಸ ಕುರಿತು.**

***

ರಾಜ್ಯದ ಅಭಿವೃದ್ಧಿ ಹಾಗೂ ಯೋಜನಾ ಕಾರ್ಯಕ್ರಮಗಳ ಬಗ್ಗೆ ಇಲಾಖೆಗಳಲ್ಲಿನ ಪ್ರಗತಿ ಪರಿಶೀಲನೆ ಸಲುವಾಗಿ ಇಲಾಖಾ ಮುಖ್ಯಸ್ಥರು, ವಿಧಾನ ಮಂಡಲದ ಅಧಿವೇಶನದ ಸಂದರ್ಭವನ್ನು ಹೊರತುಪಡಿಸಿ, ಪ್ರತಿ ವಾರದಲ್ಲಿ ಕನಿಷ್ಠ ಎರಡು ದಿನಗಳಂದು ರಾಜ್ಯದಲ್ಲಿ ಪ್ರವಾಸ ಮಾಡಿ ಇಲಾಖೆಯ ಕಾರ್ಯಕ್ರಮಗಳ ಅನುಷ್ಠಾನವನ್ನು ತಪಾಸಣೆ ಮಾಡುವುದು ಮತ್ತು ಸದರಿ ಪ್ರವಾಸಗಳ ಕುರಿತು ಪ್ರತಿ ತಿಂಗಳು 5ನೇ ತಾರೀಖಿನೊಳಗಾಗಿ ತಮ್ಮ ಪ್ರವಾಸ ವರದಿಗಳನ್ನು ಸಂಬಂಧಪಟ್ಟ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ/ಕಾರ್ಯದರ್ಶಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ತಪ್ಪದೇ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ

(ಎಂ.ಎನ್. ವಿದ್ಯಾಶಂಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ.
14/9/10 ಸಿಆಸುಇ (ಆಡಳಿತ ಸುಧಾರಣೆ).

ಗೆ:
ರಾಜ್ಯದ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

**ಪ್ರತಿ:**

1) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2) ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು.
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಎಫ್ಆರ್ ಮತ್ತು ಬಿಸಿಸಿ), ವಿಧಾನಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 4 ಇಸಪ 2005

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:4.7.2005

## ಸುತ್ತೋಲೆ

ವಿಷಯ: ಇಲಾಖಾ ಮುಖ್ಯಸ್ಥರ ಪ್ರವಾಸದ ವರದಿಗಳನ್ನು ಸಂಬಂಧಪಟ್ಟ ಸಚಿವಾಲಯದ ಆಡಳಿತ ಇಲಾಖೆಗಳು ಸಮೀಕ್ಷಿಸಿ, ಸಮೀಕ್ಷಾ ವರದಿಗಳನ್ನು ಕಳುಹಿಸಿಕೊಡುವ ಬಗ್ಗೆ.

**********

ಇಲಾಖಾ ಮುಖ್ಯಸ್ಥರುಗಳು, ತಮ್ಮ ಪ್ರವಾಸ ವರದಿಗಳನ್ನು ನೇರವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಕಳುಹಿಸುತ್ತಿದ್ದು, ಅವುಗಳನ್ನು [redacted] ಯಾವುದೇ ಕಾರಣಕ್ಕೂ ಇಲಾಖಾ ಮುಖ್ಯಸ್ಥರು ತಮ್ಮ ಪ್ರವಾಸದ ವರದಿಯನ್ನು ನೇರವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸಲ್ಲಿಸಬಾರದೆಂದು ಸೂಚಿಸಲಾಗಿದೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕ್ಷೇತ್ರ ಇಲಾಖೆಗಳ ಮುಖ್ಯಸ್ಥರುಗಳಿಂದ ಸ್ವೀಕೃತವಾಗುವ ಪ್ರವಾಸದ ವರದಿಗಳನ್ನು ಸಮೀಕ್ಷಿಸಿ, ಸಮೀಕ್ಷಾ ವರದಿಗಳನ್ನು ಪ್ರತಿ ತಿಂಗಳು 10ನೇ ತಾರೀಖಿನೊಳಗಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆಡಳಿತ ಸುಧಾರಣಾ ವಿಭಾಗಕ್ಕೆ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ

(ರಮೇಶ್ ಝಳಕಿ)
ಸರ್ಕಾರದ ಕಾರ್ಯದರ್ಶಿ
ಸಿಆಸುಇ (ಆಡಳಿತ ಸುಧಾರಣೆ)

ಇವರಿಗೆ:

1) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2) ಎಲ್ಲಾ ಪ್ರಾದೇಶಿಕ ಆಯುಕ್ತರು/ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಇಲಾಖಾ ಮುಖ್ಯಸ್ಥರುಗಳು
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ / ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರ**

ಸಂಖ್ಯೆಸಿಆಸುಇ 28 ಅಸಪ 2009

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 5ನೇ ಹಂತ, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:4/7/2009

# ಸುತ್ತೋಲೆ

**ವಿಷಯ:** ಜಿಲ್ಲಾ ಮಟ್ಟದ ಹಾಗೂ ಉಪ ವಿಭಾಗ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಾಲ್ಲೂಕು ಕೇಂದ್ರಗಳಿಗೆ ಸಂದರ್ಶನ ನೀಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಸದಸ್ಯರ ಗಮನಕ್ಕೆ ತರುವ ಬಗ್ಗೆ.

**ಉಲ್ಲೇಖ:** ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಪಿಎಸ್‌ಸಿಎಂ/1677/2009 ದಿನಾಂಕ: 23/5/2009.

**********

ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಮಾಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರ ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಾರದಿರುವುದರಿಂದ ಜನಪ್ರತಿನಿಧಿಗಳು ತಮ್ಮ ಕ್ಷೇತ್ರದ ಕೆಲಸಕಾರ್ಯಗಳ ಬಗ್ಗೆ ಸಲಹೆ ಸೂಚನೆ ನೀಡಲು ಸಾಧ್ಯವಾಗದಂತಾಗಿದೆ. ಅಲ್ಲದೆ ಕ್ಷೇತ್ರಗಳಲ್ಲಿ ಆಗಬೇಕಾದ ಕೆಲಸ ಕಾರ್ಯಗಳ ಬಗ್ಗೆ ಹಾಗೂ ಕ್ಷೇತ್ರದ ಅಗತ್ಯತೆಗಳ ಕುರಿತು ಸಾರ್ವಜನಿಕರು ಸಂಬಂಧಿಸಿದ ಕ್ಷೇತ್ರದ ಮಾನ್ಯ ಸಂಸದರು ಮತ್ತು ಮಾನ್ಯ ಶಾಸಕರುಗಳ ಗಮನಕ್ಕೆ ತರುವುದರಿಂದ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಮ್ಮ ಪ್ರವಾಸ ಕಾರ್ಯಕ್ರಮ ಸೂಚಿಯನ್ನು ಪ್ರವಾಸ ಮಾಡುವ ಪೂರ್ವದಲ್ಲೇ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರುಗಳಿಗೆ ಕಳುಹಿಸಿದರೆ, ಅಧಿಕಾರಿಗಳು ಪ್ರವಾಸ ಮಾಡುವ ದಿನದಂದು ಸನ್ಮಾನ್ಯ ಸದಸ್ಯರುಗಳು ಸಹ ಸದರಿ ಸಭೆಗಳಲ್ಲಿ ಹಾಜರಿದ್ದು, ಪ್ರಗತಿ ಪರಿಶೀಲನೆ ಕೈಗೊಳ್ಳಲು ಅನುಕೂಲವಾಗುವುದು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಾಯಕವಾಗುತ್ತದೆ.

ಆದುದರಿಂದ ಇನ್ನು ಮುಂದೆ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಕೈಗೊಳ್ಳುವ ಅಧಿಕಾರಿಗಳು ಪ್ರವಾಸ ಮಾಡುವ ಪೂರ್ವದಲ್ಲಿ ತಮ್ಮ ಪ್ರವಾಸ ಕಾರ್ಯಕ್ರಮದ ಸೂಚಿಯನ್ನು ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಪ್ಪದೇ ತರಬೇಕೆಂದು ಈ ಮೂಲಕ ಸೂಚಿಸಲಾಗಿದೆ.

(ಸಹಿ) 8/7/09
**(ರಂಜನಿ ಶ್ರೀಕುಮಾರ್)**
**ಸರ್ಕಾರದ ಪ್ರಧಾನ ಕಾರ್ಯದರ್ಶಿ**
**ಸಿಆಸುಇ (ಆಡಳಿತ ಸುಧಾರಣೆ).**

**ಇವರಿಗೆ:**

1)ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು/ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
3) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
4) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ಎಲ್ಲಾ ಉಪ ವಿಭಾಗಾಧಿಕಾರಿಗಳು.
7) ಎಲ್ಲಾ ತಾಲ್ಲೂಕು ತಹಶೀಲ್ದಾರರು.

**ಪ್ರತಿ ಮಾಹಿತಿಗಾಗಿ:** 1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
2) ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.

V. MADHU